<u>1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಮಾಲೂರು.</u>

ದಿನಾಂಕ 24 ನೇ ಎಪ್ರೀಲ್-2026

<u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 905/2025</u>

<u>ಫಿರ್ಯಾದುದಾರರು:</u> ರಾಜ್ಯ ಪರಃ ಮಾಸ್ತಿ ಆರಕ್ಷಕರು,

ವಿರುದ್ಧ

<u>ಆರೋಪಿತರು:</u> 1. ಸೋಮಶೇಖರ್, 42 ವರ್ಷ,
ಬಿನ್ ಲೇಟ್ ವೆಂಕಟೇಶಪ್ಪ,
ವಾಸಃ ಪೆಲವನಹಳ್ಳಿ ಗ್ರಾಮ,
ಟೇಕಲ್ ಹೋಬಳಿ, ಮಾಲೂರು ತಾಲ್ಲೂಕು.

## :- <u>ದೋಷಾರೋಪಣೆ</u> :-

ಶ್ರೀಮತಿ. ಹೆಚ್.ಜೆ.ಶಿಲ್ಪ ಎಂ.ಎ.ಎಲ್.ಎಲ್.ಎಂ. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, C/c 1ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಮಾಲೂರು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಈ ಕೆಳಕಂಡಂತೆ ದೋಷಾರೋಪಣೆ ಹೊರಿಸುತ್ತಿದ್ದೇನೆ.

ಮಾಲೂರು ತಾಲ್ಲೂಕು, ಟೇಕಲ್ ಹೋಬಳಿ, ಪೆಳವನಹಳ್ಳಿ ಗ್ರಾಮದ ಸರ್ವೆ ನಂ.02 ರವರ ಬಾಬ್ತು 39 ಗುಂಟೆ ಜಮೀನು ಇದ್ದು, ಸದರಿ ಜಮೀನಿನ ವಿಚಾರದಲ್ಲಿ ಆರೋಪಿಯಾದ ನಿಮ್ಮ ತಕರಾರು ಮಾಡುತ್ತಿದ್ದು, ಚಾಸಾ-2 ರವರು ಸರ್ವೆ ಅಧಿಕಾರಿಗಳಿಂದ ಸರ್ವೆ ಮಾಡಿಸಿ ಚಾಸಾ-2 ರವರಿಗೆ ಬಂದ ಜಮೀನಿಗೆ ಸುತ್ತಲೂ ಕಲ್ಲು ಕೂಚಗಳನ್ನು ನೆಟ್ಟಿರುತ್ತಾರೆ. ದಿ.25.02.2025 ರಂದು ರಾತ್ರಿ ವೇಳೆಯಲ್ಲಿ ಆರೋಪಿಯಾದ ನೀವು ಮೇಲ್ಕಂಡ ಜಮೀನಿನೊಳಗೆ ಅಕ್ರಮ ಪ್ರವೇಶ ಮಾಡಿರುತ್ತೀರಿ. ಆದಕಾರಣ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ. 329(3) ರಡಿಯಲ್ಲಿ ಶಿಕ್ಷಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಮೇಲೆ ಹೇಳಿದ ವಿಷಯಕ್ಕೆ ಸಂಬಂಧಿಸಿದಂತೆ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಮೇಲ್ಕಂಡ ಜಮೀನಿನೊಳಗೆ ಅಕ್ರಮ ಪ್ರವೇಶ ಮಾಡಿ ಕಲ್ಲು ಕೂಚಗಳನ್ನು ಹೊಡೆದು ಹಾಕಿ ಸುಮಾರು 20,000/- ರೂ.ಗಳನ

ನಷ್ಟವನ್ನು ಉಂಟು ಮಾಡಿರುತ್ತೀರಿ. ಆದಕಾರಣ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ. 324(3) ರಡಿಯಲ್ಲಿ ಶಿಕ್ಷಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಮೇಲೆ ಹೇಳಿದ ವಿಷಯಕ್ಕೆ ಸಂಬಂಧಿಸಿದಂತೆ, ವಿಚಾರ ತಿಳಿದ ಚಾಸಾ-2 ಮತ್ತು 3 ಜಮೀನಿನ ಬಳಿ ಹೋಗಿ ಕಲ್ಲು ಕೂಚಗಳನ್ನು ಯಾರು ಹೊಡೆದು ಹಾಕಿದವರು ಎಂದು ವಿಚಾರಿಸುತ್ತಿದ್ದಾಗ ಆರೋಪಿತರಾದ ನೀವು ಅಲ್ಲಿಗೆ ಬಂದು ಚಾಸಾ-2 ಮತ್ತು 3 ರವರನ್ನು ಕುರಿತು ನನ್ನ ಮಕ್ಕಳೇ ನಾನೇ ಕಲ್ಲು ಕೂಚಗಳನ್ನು ತಳ್ಳಿ ಹಾಕಿದ್ದು ಏನು ಮಾಡಿಕೊಳುತ್ತೀರೊ ಮಾಡಿಕೊಳ್ಳಿ ಎಂದು ಅವ್ಯಾಚ ಶಬ್ದಗಳಿಂದ ಬೈದಿರುವ ಕಾರಣ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.352 ರಡಿಯಲ್ಲಿ ಶಿಕ್ಷಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ನಾಲ್ಕನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಮೇಲೆ ಹೇಳಿದ ವಿಷಯಕ್ಕೆ ಸಂಬಂಧಿಸಿದಂತೆ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-2 ಮತ್ತು 3 ರವರನ್ನು ಕೈಯಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿರುವ ಕಾರಣ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ. 115(2) ರಡಿಯಲ್ಲಿ ಶಿಕ್ಷಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಮೇಲೆ ಹೇಳಿದ ವಿಷಯಕ್ಕೆ ಸಂಬಂಧಿಸಿದಂತೆ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-2 ಮತ್ತು 3 ರವರಿಗೆ ಜಮೀನಿನ ತಂಟೆಗೆ ಬಂದರೆ ಪ್ರಾಣ ತೆಗೆಯುವುದಾಗಿ ಪ್ರಾಣ ಬೆದರಿಕೆ ಹಾಕಿರುವ ಕಾರಣ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ 351(2)ರಡಿಯಲ್ಲಿ ಶಿಕ್ಷಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ನೀವು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಆಪಾದನೆಯನ್ನು ಮಾಡಿರುವುದರಿಂದ ನಾನು ಈ ಮೇಲಿನ ಆಪಾದನೆಯನ್ನು ನೀವು ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ದಿನಾಂಕಃ 24.04.2026
ಸ್ಥಳಃ ಮಾಲೂರು

ಸಹಿ/-

(ಹೆಚ್.ಜೆ.ಶಿಲ್ಪಾ)
C/c 2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,
ಮಾಲೂರು.